ಕರ್ನಾಟಕ ಸರ್ಕಾರ

ಸಂ:ಗ್ರಾಅಪ/03/ಗಣಕ ಕೋಶ-2013

ಸಂ:ಗ್ರಾಅಪ/46/ಗ್ರಾನೀಸ(2)2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:08.04.2014

## ಸುತ್ತೋಲೆ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ(NRDWP) ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶಕ್ಕೆ ಅಳವಡಿಸಿ ಪಾವತಿ ಮಾಡುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಮಸಂಖ್ಯೆ: ದಿನಾಂಕ:20.09.2013.

******

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಭಿವೃದ್ಧಿ ಪಡಿಸಿರುವ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿನಾಂಕ:03.10.2013 ರಿಂದ ಕಡ್ಡಾಯಗೊಳಿಸಲಾಗಿರುತ್ತದೆ ಹಾಗೂ ಇಲಾಖೆಯಿಂದ ತೆಗೆದುಕೊಳ್ಳಲಾಗುವ ಎಲ್ಲಾ ಕಾಮಗಾರಿಗಳಿಗೆ ತಂತ್ರಾಂಶದ ಹೊರಗಡೆ ಬಿಲ್ಲುಗಳನ್ನು ಪಾವತಿ ಮಾಡುವುದನ್ನು ಸದರಿ ದಿನಾಂಕದಿಂದ ನಿಷೇದಿಸಲಾಗಿದೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮವನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಲಾಗಿರಲಿಲ್ಲ. **ಪ್ರಸ್ತುತ ದಿನಾಂಕ 01.04.2014ರಿಂದ ಈ ಯೋಜನೆಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶಕ್ಕೆ ಅಳವಡಿಸಲು ತೀರ್ಮಾನಿಸಲಾಗಿದ್ದು ಈ ಕಾರ್ಯಕ್ರಮದ ಅನುಷ್ಠಾನ, ಜವಾಬ್ದಾರಿ ಹೊಂದಿರುವ ಎಲ್ಲಾ ಅಧಿಕಾರಿಗಳು ಕಾರ್ಯಕ್ರಮದ ಎಲ್ಲಾ ಹಂತದ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶಕ್ಕೆ ಅಳವಡಿಸಬೇಕಾಗಿರುತ್ತದೆ.** ಹಾಗೂ ಕಾರ್ಯಕ್ರಮದ ಬಿಲ್ಲುಗಳನ್ನು ಕಡ್ಡಾಯವಾಗಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಸೃಜಿಸಲಾಗುವ ಪಾವತಿ ಆದೇಶದ ಮೂಲಕ ಪಾವತಿ ಮಾಡಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮದ ಮುಂದುವರಿದ ಕಾಮಗಾರಿಗಳು ಸೇರಿದಂತೆ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶಕ್ಕೆ ಅಳವಡಿಸಲು ಕೂಡಲೇ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ. ಹಾಗೂ **ದಿನಾಂಕ:01.04.2014ರಿಂದ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮದ ಬಿಲ್ಲುಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಸೃಜಿಸಲಾದ ಪಾವತಿ ಆದೇಶವಿಲ್ಲದೆ ಪಾವತಿ ಮಾಡುವುದನ್ನು ನಿಷೇದಿಸಿದೆ.** ಒಂದು ವೇಳೆ ಇದನ್ನು ನಿರ್ಲಕ್ಷಿಸಿದ್ದಲ್ಲಿ ಅಥವಾ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಪಾವತಿ ಆದೇಶವಿಲ್ಲದೆ ಪಾವತಿ ಮಾಡಿದ್ದಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
Mail id:rk3452000@gmail.com
Ph No:22032806, Fax No:22203175

ಇವರಿಗೆ:

1. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ (8) ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿಗಳು.
3. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು.
4. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
6. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-09.
7. ಮ್ಯಾನೇಜರ್, ಕಾರ್ಪೋರೇಷನ್ ಬ್ಯಾಂಕ್, ಮಲ್ಲೇಶ್ವರಂ ಶಾಖೆ, ಬೆಂಗಳೂರು-03.
8. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)

ಪ್ರತಿ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್)/ಆಯುಕ್ತರು(ಗ್ರಾಮೀಣಾಭಿವೃದ್ಧಿ) /ಸರ್ಕಾರದ ಉಪ ಕಾರ್ಯದರ್ಶಿ, (ಗ್ರಾನೀಸ), ನಿರ್ದೇಶಕರು (ಇ-ಆಡಳಿತ), ಇವರ ಆಪ್ತ ಕಾರ್ಯದರ್ಶಿಯವರಿಗೆ, ಗ್ರಾಅಪ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.